# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 639 |
| ಸದಸ್ಯರ ಹೆಸರು: | : | ಶ್ರೀ ಡಿ.ಟಿ ಶ್ರೀನಿವಾಸ್ (ಡಿ.ಟಿ.ಎಸ್)<br>(ಶಿಕ್ಷಕರ ಕ್ಷೇತ್ರದಿಂದ ಚಿನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ: | : | 13.12.2024. |
| ಉತ್ತರಿಸುವವರು: | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಅಂಗನವಾಡಿ ಶಿಕ್ಷಕರು ಮತ್ತು ಕಾರ್ಯಕರ್ತರಿಗೆ ಮಾಹೆಯಾನ ವೇತನವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರ ಮುಂದಿದೆಯೇ: ಹಾಗಿದ್ದಲ್ಲಿ ಎಷ್ಟು ವೇತನ ಹೆಚ್ಚಿಸಲಾಗುವುದು; | ಪ್ರಸ್ತುತ ಅಂಗನವಾಡಿ ಕಾರ್ಯಕರ್ತೆಯರಿಗೆ ರೂ.10,000, ಸಹಾಯಕಿಯರಿಗೆ ರೂ.5,250/- ಮತ್ತು ಮಿನಿ ಅಂಗನವಾಡಿ ಕಾರ್ಯಕರ್ತೆಯರಿಗೆ ರೂ.6,250/- ಗೌರವಧನವನ್ನು ಪಾವತಿಸಲಾಗುತ್ತಿದ್ದು, ಅಂಗನವಾಡಿ ಕಾರ್ಯಕರ್ತೆ / ಸಹಾಯಕಿ ಮತ್ತು ಮಿನಿ ಅಂಗನವಾಡಿ ಕಾರ್ಯಕರ್ತೆಯರ ಸೇವಾ ಹಿರಿತನದ ಮೇಲೆ 20 ವರ್ಷಕ್ಕಿಂತ ಹೆಚ್ಚು ಸೇವೆ ಸಲ್ಲಿಸಿದವರಿಗೆ ರೂ.1,500/-, 10-20 ವರ್ಷ ಸೇವೆ ಸಲ್ಲಿಸಿದವರಿಗೆ ರೂ.1,250/- ಮತ್ತು 10 ವರ್ಷಕ್ಕಿಂತ ಕಡಿಮೆ ಸೇವೆ ಸಲ್ಲಿಸಿದವರಿಗೆ ರೂ.1,000/-ಗಳ ಗೌರವಧನವನ್ನು ಹೆಚ್ಚಿಸಿ ಆದೇಶಿಸಲಾಗಿದೆ. |
| ಆ. | ಅಂಗನವಾಡಿ ಸಿಬ್ಬಂದಿಯನ್ನು ಸರ್ಕಾರಿ ನೌಕರರೆಂದು ಪರಿಗಣಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು: | ಐಸಿಡಿಎಸ್ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಅಂಗನವಾಡಿ ಕಾರ್ಯಕರ್ತೆ/ ಸಹಾಕಿಯರ ಸೇವೆಯು ಗೌರವಧನ ಆಧಾರಿತ ಸೇವೆಯಾಗಿರುತ್ತದೆ. ಮತ್ತು ದಿನದ ಒಟ್ಟು ಕಾರ್ಯಾವಧಿ 6.30 ತಾಸುಗಳಾಗಿರುವುದರಿಂದ ಸದರಿ ಸೇವೆಯನ್ನು ಸರ್ಕಾರಿ ನೌಕರರ ಸೇವೆಯಡಿ ಪರಿಗಣಿಸಲು ಅವಕಾಶವಿರುವುದಿಲ್ಲ. |

**ಸಂಖ್ಯೆ:** ಮಮಇ 310 ಐಸಿಡಿ 2024

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಸಚಿವರು